# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 21.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ಬೆಳಿಗ್ಗೆ ವಾರ್ಡ್ ನಂ.158 ದೀಪಾಂಜಲಿ ನಗರದಲ್ಲಿ ಹಮ್ಮಿಕೊಳ್ಳಲಾದ ತೀವ್ರ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರಸ್ತೆ ಬದಿಯಿದ್ದ, ಕಸ, ಕಲ್ಲು ಮಣ್ಣಿನ ರಾಶಿ, ಇತರೆ ತ್ಯಾಜ್ಯಗಳನ್ನು ತೆರವುಗೊಳಿಸುವ ಕಾರ್ಯವನ್ನು ಪರಿಶೀಲನೆ ಮಾಡಿದರು.

ಆವಲಹಳ್ಳಿ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಸಾರ್ವಜನಿಕರು ತ್ಯಾಜ್ಯಗಳನ್ನು ರಸ್ತೆ ಮೇಲೆ ಹಾಕಿರುವ ಪರಿಣಾಮ ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟಾಗುತ್ತಿರುವುದನ್ನು ಮತ್ತು ಈ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವ ದೃಷ್ಟಿಯಿಂದ ವಿಶೇಷ ಒತ್ತುಕೊಟ್ಟು, ಸ್ವಚ್ಛತೆಯನ್ನು ಕೈಗೊಳ್ಳಲಾಯಿತು.

ಈ ಸ್ವಚ್ಛತಾ ಕಾರ್ಯದಲ್ಲಿ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು. ಕೆಲವು ಸಾರ್ವಜನಿಕರು ಮಾನ್ಯ ಆಯುಕ್ತರಿಗೆ ಮನವಿ ಮಾಡಿ, ಈ ರೀತಿಯ ಸ್ವಚ್ಛತಾ ಕಾರ್ಯಕ್ರಮ ತಿಂಗಳಿನಲ್ಲಿ ಒಂದೆರಡು ಬಾರಿ ನಮ್ಮ ವಾರ್ಡ್‌ನಲ್ಲಿ ಹಮ್ಮಿಕೊಳ್ಳಬೇಕು. ಇದರಿಂದ ರಸ್ತೆಗಳು ಸ್ವಚ್ಛಗೊಳ್ಳುತ್ತವೆ ಮತ್ತು ಪ್ರದೇಶ ಸುಂದರವಾಗಿ ಕಾಣುತ್ತದೆಂದು ಕೇಳಿಕೊಂಡರು.

ತದನಂತರ ಪಾಲಿಕೆ ಆಯುಕ್ತರು ಆವಲಹಳ್ಳಿಯ 50 ಅಡಿ ರಸ್ತೆಗೆ ಹೊಂದಿಕೊಂಡಿರುವ ಒಂದೂವರೆ ಎಕರೆ ಮೈದಾನದಲ್ಲಿ ಹಮ್ಮಿಕೊಳ್ಳಲಾದ ಗಿಡನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಈ ಪ್ರದೇಶದಲ್ಲಿ ಸುಮಾರು 86 ಗಿಡಗಳನ್ನು ನೆಟ್ಟು, ಇದನ್ನು ವೃಕ್ಷ ಉದ್ಯಾನವನವನ್ನಾಗಿ ಪರಿವರ್ತಿಸಲಾಗಿದೆ. ಪಕ್ಷಿಗಳನ್ನು ಆಕರ್ಷಿಸುವಂತೆ ಹಣ್ಣು ಬಿಡುವಂತಹ ಸಸಿಗಳನ್ನು ನೆಡಲಾಗಿದೆ. ಮುಂದಿನ ದಿನಗಳಲ್ಲಿ ಇದೊಂದು ಉತ್ತಮ ವೃಕ್ಷ ಉದ್ಯಾನವನವಾಗಲಿದೆ ಎಂದು ತಿಳಿಸಿದರು.

ತದನಂತರ ಸಮೀಪದಲ್ಲೇ ಇರುವ ಪಾಲಿಕೆಗೆ ಸೇರಿದ 2 ಎಕರೆಯಷ್ಟು ಜಮೀನಿನ ಮಾಲೀಕತ್ವಕ್ಕೆ ಸಂಬಂಧಪಟ್ಟ ವಿಷಯ ನ್ಯಾಯಾಲಯದಲ್ಲಿದೆ. ಅದಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪಡೆದು, ಆದಷ್ಟು ಬೇಗನೆ ನ್ಯಾಯಾಲಯದಲ್ಲಿ ಇತ್ಯರ್ಥವಾಗುವಂತೆ ಕ್ರಮ ಕೈಗೊಳ್ಳಲು ಜಂಟಿ ಆಯುಕ್ತರು (ದಕ್ಷಿಣ) ರವರಿಗೆ ತಿಳಿಸಿದರು. ಕೇಸು ಇತ್ಯರ್ಥವಾದ ನಂತರ ಅದನ್ನು ಕೂಡಾ ವೃಕ್ಷ ಉದ್ಯಾನವನವನ್ನಾಗಿ ಅಭಿವೃದ್ಧಿಪಡಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ವಾರ್ಡ್ ನಂ.158ರ ಪಾಲಿಕೆ ಸದಸ್ಯರಾದ ಶ್ರೀಮತಿ ಮಾಲತಿ ರವರು ಮತ್ತು ಪಾಲಿಕೆಯ ಅಧಿಕಾರಿಗಳು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 21.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯ ವ್ಯಾಪ್ತಿಯಲ್ಲಿನ ಐಟಿಪಿಎಲ್ ರಸ್ತೆಯಲ್ಲಿ, ಕೆ.ಆರ್. ಪುರ ಸೇತುವೆಯಿಂದ ಓಫಾರಂವರೆಗೆ, ಗ್ರಾಫೈಟ್ ಇಂಡಿಯಾ ರಸ್ತೆಯಲ್ಲಿ, ಹೂಡಿ ಸರ್ಕಲ್‌ನಿಂದ ಕುಂದಲಹಳ್ಳಿ ಗೇಟ್‌ವರೆಗೆ ಹಾಗೂ ರಾಮಮೂರ್ತಿನಗರ ಮುಖ್ಯರಸ್ತೆಯ ಪಾದಚಾರಿ ಮಾರ್ಗಗಳಲ್ಲಿ ಸಾರ್ವಜನಿಕರು ಓಡಾಡಲು ಅಡಚಣೆ ಉಂಟು ಮಾಡುತ್ತಾ, ಅನಧಿಕೃತವಾಗಿ ವ್ಯಾಪಾರ ವಹಿವಾಟುಗಳನ್ನು ನಡೆಸುತ್ತಿದ್ದ ಪೆಟ್ಟಿ ಅಂಗಡಿಗಳು, ಟೆಲಿಫೋನ್ ಬೂತ್‌ಗಳು, ತಳ್ಳುವ ಗಾಡಿಗಳು, ಹಣ್ಣಿನ ಅಂಗಡಿಗಳು, ತರಕಾರಿ ಮಾರುವವರು ಇವರುಗಳಿಗೆ ಕರಪತ್ರದ ಮೂಲಕ, ಪತ್ರಿಕಾ ಮಾಧ್ಯಮದ ಮೂಲಕ ತಿಳುವಳಿಕೆ ನೀಡಿ, ಅನಧಿಕೃತವಾಗಿ ವ್ಯಾಪಾರ ವಹಿವಾಟುಗಳನ್ನು ನಡೆಸಬಾರದೆಂದು ಎಚ್ಚರಿಕೆ ನೀಡಿ ತೆರವುಗೊಳಿಸಬೇಕೆಂದು ತಿಳಿಸಿದ್ದರೂ ಸಹ ತೆರವುಗೊಳಿಸಿರುವುದಿಲ್ಲ.

ಆದ್ದರಿಂದ ದಿನಾಂಕ: 21.07.2011 ರಂದು ಬೆಳಿಗ್ಗೆ 6.00 ಗಂಟೆಗೆ ತೆರವು ಕಾರ್ಯಾಚರಣೆಯನ್ನು ಹಮ್ಮಿಕೊಂಡು, ಮಹದೇವಪುರ ಪೊಲೀಸ್ ಠಾಣೆ ಹಾಗೂ ಕೆ.ಆರ್. ಪುರ ಪೊಲೀಸ್ ಠಾಣೆಗಳ 75ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯವರ ಸಹಕಾರದೊಂದಿಗೆ ಬಿಬಿಎಂಪಿಯ 300ಕ್ಕೂ ಹೆಚ್ಚು ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಅನಧಿಕೃತ ವ್ಯಾಪಾರ ವಹಿವಾಟುಗಳನ್ನು ತೆರವುಗೊಳಿಸಿ, ಸಾರ್ವಜನಿಕರ ಸುಗಮ ಓಡಾಟಕ್ಕೆ ಪಾದಚಾರಿ ಮಾರ್ಗಗಳನ್ನು ಮುಕ್ತಗೊಳಿಸಲಾಗಿರುತ್ತದೆ ಎಂದು ಮಹದೇವಪುರ ವಲಯ ಜಂಟಿ ಆಯುಕ್ತರಾದ ಶ್ರೀ ಕೆ.ಎನ್. ದೇವರಾಜು ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**